ಕರ್ನಾಟಕ ಸರ್ಕಾರ
(ಪಿ.ಆರ್.ಪಿ.67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ.ಸಂಖ್ಯೆ 57)<br>ನಮೂನೆ ಸಂಖ್ಯೆ 4 |

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ಹಾಗೂ ಸ್ಪೆಷಲ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**

**ಸ್ಪೆಷಲ್ ಕೇಸ್ ನಂಬರ್ : 688/2022**

**ಫ್ರಾಸಾ- 5 ಚಾಸಾ- 7**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ಶಿವಣ್ಣ |
| ತಂದೆಯ ಹೆಸರುಃ | : | ಜಯರಾಮಪ್ಪ |
| ವಯಸ್ಸುಃ | : | 36 ವರ್ಷ |
| ಉದ್ಯೋಗಃ | : | ವ್ಯವಸಾಯ |
| ವಾಸ | : | ಕೊಟ್ಟಿಗೆರಹಟ್ಟಿ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ: 10-04-2026:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ವಿಶೇಷ ಅಭಿಯೋಜಕರಿಂದಃ**

ಈಗ ತೋರಿಸಿದ ನಿಪಿ-7 ಮತ್ತು 8 ರಲ್ಲಿ ನನ್ನ ರುಜು ಇದೆ. ಸಾಕ್ಷಿಯು ಗುರುತಿಸಿದ ಸಹಿಗಳನ್ನು ಕ್ರಮವಾಗಿ ನಿಪಿ-7(ಬಿ) ಮತ್ತು 8(ಬಿ) ಎಂದು ಗುರುತಿಸಲಾಯಿತು. ಆ ಸಹಿಗಳನ್ನು ಎಲ್ಲಿ ಹಾಕಿರುತ್ತೇನೆಂದು ಗೊತ್ತಿಲ್ಲ. ನಿಪಿ-7 ಮತ್ತು 8 ರಲ್ಲಿ ಬರೆದ ವಿಚಾರ ಗೊತ್ತಿಲ್ಲ. ಪೊಲೀಸರು ನನ್ನನ್ನು ಸಿದ್ದಮ್ಮಳ ಮನೆ ಹತ್ತಿರ ಕರೆಸಿಲ್ಲ ನನ್ನ ಸಮಕ್ಷಮ ಪಂಚನಾಮೆ ನಡೆಸಿಲ್ಲ ಹಾಗೂ ಎಲ್ಲಮ್ಮ ದೇವಸ್ಥಾನದ ಬಳಿ ಕರೆಸಿಲ್ಲ ಮತ್ತು ಆ ಎರಡೂ ಸ್ಥಳದಲ್ಲಿ ಯಾವುದೇ ಫೋಟೋತೆಗೆಸಿಲ್ಲ.

(ಈ ಹಂತದಲ್ಲಿ ಮಾನ್ಯ ವಿಶೇಷ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ, ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ದಾಖಲೆಗೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿಯುವುದು ಕಂಡುಬರುತ್ತದೆ, ಆದ್ದರಿಂದ ಮಾನ್ಯ ವಿಶೇಷ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ)

**ಪಾಟೀಸವಾಲುಃ ಸರ್ಕಾರದ ಪರ ಮಾನ್ಯ ವಿಶೇಷ ಅಭಿಯೋಜಕರಿಂದಃ**

ದಿನಾಂಕ 4-1-2021 ರಂದು ಪೊಲೀಸರು ಬೆಳಿಗ್ಗೆ 9-30 ರಿಂದ 10 ಗಂಟೆ ಸಮಯಕ್ಕೆ ಎಲ್ಲಮ್ಮ ದೇವಸ್ಥಾನದ ಬಳಿ ಚಾಸಾ-2 ರವರು ತೋರಿಸಿದ ಸ್ಥಳದಲ್ಲಿ ನಿಪಿ-7ರಂತೆ ಪಂಚನಾಮೆ ಬರೆದು ನನ್ನ ಸಹಿ

ಪಡೆದರು ಎಂದರೆ ಸರಿಯಲ್ಲ. ಅದೇ ದಿನಾಂಕದಂದು ಬೆಳಿಗ್ಗೆ 10-3 0 ರಿಂದ 11 ಗಂಟೆ ಸಮಯದಲ್ಲಿ ಸಿದ್ದಮ್ಮಳ ಮನೆ ಮುಂದೆ ಪೊಲೀಸರು ಚಾಸಾ-2 ರವರು ತೋರಿಸಿದ ಸ್ಥಳದಲ್ಲಿ ನಿಪಿ-8 ರಂತೆ ಪಂಚನಾಮೆ ಮಾಡಿ ಸಹಿ ಪಡೆದುಕೊಂಡರು ಎಂದರೆ ಸರಿಯಲ್ಲ. ಕಾ.ಸಂ.ಒ.ಬಾಲಕನಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ** ಕಾ.ಸಂ.ಒ.ಬಾಲಕನ **ಪರ ವಕೀಲರಿಂದಃ**

ಇಲ್ಲವೆಂದು ಹೇಳುತ್ತಾರೆ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ಹಾಗೂ ಸ್ಪೆಷಲ್**

**ನ್ಯಾಯಾಧೀಶರು, ಹಾಸನ.**